JUNE 19, 2026

AKASHAVANI - DHARWAD

PRADESH SAAMACHARA (KANNADA) 12 PM

<><><>

ಪ್ರಧಾನಮಂತ್ರಿ ವಿಕಸಿತ ಭಾರತ, ರೋಜಗಾರ ಯೋಜನೆಯ ಯಶಸ್ವಿಅನುಷ್ಠಾನದ ನೆನಪಿಗಾಗಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ, ಇಂದು ಸಂಜೆ 4 ಗಂಟೆಗೆ ಹೊಸ ದಿಲ್ಲಿಯ ವಿಜ್ಞಾನ ಭವನದಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಪಾಲ್ಗೊಳ್ಳಲಿದ್ದು 2 ಸಾವಿರದ 400 ಕೋಟಿ ರೂಪಾಯಿ, ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಗಳಿಗೆ ಪ್ರೋತ್ಸಾಹಧನ ವಿತರಿಸಲಿದ್ದಾರೆ. 15 ಲಕ್ಷಕ್ಕೂ ಹೆಚ್ಚು ಜನರಿಗೆ ಉದ್ಯೋಗ ಹಾಗೂ ಉದ್ಯೋಗದಾತರು ಮತ್ತು ಉದ್ಯೋಗಿ ಫಲಾನುಭವಿಗಳು, ಗಣ್ಯರು ಸೇರಿದಂತೆ, ಸಾವಿರದ 200 ಆಹ್ವಾನಿತರು ಭಾಗವಹಿಸುವ ನಿರೀಕ್ಷೆಯಿದೆ. ಪ್ರಧಾನಮಂತ್ರಿಯವರು, ದೇಶದ ವಿವಿಧ ಭಾಗಗಳನ್ನು ಪ್ರತಿನಿಧಿಸುವ ಫಲಾನುಭವಿಗಳೊಂದಿಗೆ, ಸಂವಾದ ನಡೆಸಲಿದ್ದಾರೆ. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ಸಚಿವ, ಡಾಕ್ಟರ್ ಮನ್ಸುಖ್ ಮಾಂಡವಿಯ ಹಾಗೂ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ಭಾಗವಹಿಸಲಿದ್ದಾರೆ.ದೇಶದ 200 ಸ್ಥಳಗಳಲ್ಲಿ, ಏಕಕಾಲದಲ್ಲಿ ಪ್ರಾದೇಶಿಕ ಕಾರ್ಯಕ್ರಮಗಳು, ಆಯೋಜಿತವಾಗಿವೆ. ದೇಶಾದ್ಯಂತ ನಡೆಯುವ ಕಾರ್ಯಕ್ರಮಗಳಲ್ಲಿ, 9 ಸಾವಿರ ಉದ್ಯೋಗದಾತರು, 45 ಸಾವಿರ ಉದ್ಯೋಗಿಗಳು ಪಾಲ್ಗೊಳ್ಳುವ ನಿರೀಕ್ಷೆಯಿದೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ಜೂನ್ 20 ರಂದು ಪಶ್ಚಿಮ ಬಂಗಾಳದ ಹೂಗ್ಲಿ ಜಿಲ್ಲೆಯ ತಾರಕೇಶ್ವರದಿಂದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ – ಪಿ.ಎಂ.ಕಿಸಾನ್ ಯೋಜನೆಯ 23ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ. 23ನೇ ಕಂತಿನಲ್ಲಿ, 18 ಸಾವಿರದ 880 ಕೋಟಿ ರೂಪಾಯಿಗೂ ಅಧಿಕ ಮೊತ್ತವನ್ನು, 9 ಕೋಟಿ 44 ಲಕ್ಷ ರೂಪಾಯಿ ರೈತರ ಖಾತೆಗಳಿಗೆ ನೇರವಾಗಿ ವರ್ಗಾಯಿಸಲಿದ್ದಾರೆ.

<><><>

ಜಲ ಸಂಪನ್ಮೂಲ ಖಾತೆ ಸಚಿವ, ರಾಮಲಿಂಗಾ ರೆಡ್ಡಿ ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿ, ಹೊಸದಾಗಿ ಅಳವಡಿಸಿದ ಕ್ರಸ್ಟ್ ಗೇಟ್‌ಗಳು ಹಾಗೂ ಉದ್ಘಾಟನಾ ಕಾರ್ಯಕ್ರಮದ ಸ್ಥಳ ಪರಿಶೀಲಿಸಿದರು. ಕೊಪ್ಪಳ ಜಿಲ್ಲೆ ಮುನಿರಾಬಾದ್ ಗ್ರಾಮದ ಪ್ರೌಢಶಾಲೆ ಆವರಣದಲ್ಲಿ ಇದೇ 25 ರಂದು ಕಾರ್ಯಕ್ರಮ ನಿಗದಿಯಾಗಿದೆ. ಬಳಿಕ ಮಾತನಾಡಿದ ಸಚಿವರು, ತುಂಗಭದ್ರಾ ಅಣೆಕಟ್ಟೆ ಕ್ರಸ್ಟ್ ಗೇಟ್ ಕಾಮಗಾರಿಗೆ 51 ಕೋಟಿ ರೂಪಾಯಿ ಖರ್ಚಾಗಿದೆ. ಮುಂಬರುವ 60 ವರ್ಷ, ಗೇಟ್‌ಗಳಿಗೆ ತಾಳಿಕೆ–ಬಾಳಿಕೆ ಅಂದಾಜಿಸಲಾಗಿದೆ ಎಂದರು.

<><><>

ವಿಧಾನಪರಿಷತ್ ಚುನಾವಣೆಯಲ್ಲಿ ಮೂರು ಮತಗಳು ಅಡ್ಡಮತದಾನವಾಗಿದೆ. ಒಂದು ಮತ ಅಸಿಂಧುವಾಗಿದೆ. ಇದನ್ನು ಯಾರು ಮಾಡಿದ್ದಾರೆ ಎಂಬುದು ಗೊತ್ತಾಗಲಿದೆ. ಪಕ್ಷಕ್ಕೆ ದ್ರೋಹ ಬಗೆದವರು ಸಿಕ್ಕಿಹಾಕಿಕೊಳ್ಳುತಾರೆ ಎಂದು ವಿರೋಧಪಕ್ಷದ ನಾಯಕ ಆರ್. ಅಶೋಕ್ ಹೇಳಿದ್ದಾರೆ. ವಿಧಾನಪರಿಷತ್ ಚುನಾವಣೆಯಲ್ಲಿ ಗೆದ್ದ ಅಭ್ಯರ್ಥಿಗಳಿಗೆ ಅಭಿನಂದಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆಯಲ್ಲಿ ಲಿಂಗರಾಜ ಪಾಟೀಲ್ ಹಾಗೂ ರಘು ಕೌಟಿಲ್ಯ ಅವರು ಜಯಶೀಲರಾಗಿರುವುದು ಸಂತಸ ತಂದಿದೆ. ಅಡ್ಡ ಮತದಾನ ಮಾಡಿದವರು ಯಾರು, ಯಾಕೆ ಮಾಡಿದ್ದಾರೆ ಎಂಬುದನ್ನು ಪರಿಶೀಲಿಸಲಾಗುವುದು. ಪಕ್ಷದ ವೇದಿಕೆಯಲ್ಲಿ ಇದನ್ನು ಚರ್ಚಿಸಲಾಗುವುದು ಎಂದರು.

<><><>

ದೇವಧಾನ್ಯ ರೈತ ಉತ್ಪಾದಕರ ಕಂಪೆನಿ, ಸಹಜ ಸಮೃದ್ಧ ಸಂಸ್ಥೆ ಸಹಯೋಗದಲ್ಲಿ ಹುಬ್ಬಳ್ಳಿಯ ಅರ್ಬನ್ ಓಯಾಸಿಸ್ ಮಾಲ್‌ನಲ್ಲಿ ಇಂದಿನಿಂದ ಮೂರು ದಿನಗಳ ಕಾಲ ನಡೆಯುವ 'ಹಲಸು ಮೇಳ'ವನ್ನು ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ ಮಧ್ಯಾಹ್ನ 12 ಗಂಟೆಗೆ ಉದ್ಘಾಟಿಸಲಿದ್ದು, ಅರ್ಬನ್ ಓಯಾಸಿಸ್ ಮಾಲ್ ನಿರ್ದೇಶಕ ದೀಪಕ್ ಶ್ಯಾಮ್ ಲುಲ್ಲಾ ಅಧ್ಯಕ್ಷತೆವಹಿಸಲಿದ್ದಾರೆ. 'ಹಿತ್ತಲ ಹೊನ್ನು', ಹಲಸಿನ ವೈವಿಧ್ಯತೆಯನ್ನು ಪರಿಚಯಿಸಲು, ರಾಜ್ಯದ ಹಲವು ಭಾಗಗಳ ರೈತರು, ವಿವಿಧ ತಳಿಗಳ ಹಲಸುಗಳನ್ನು ಪ್ರದರ್ಶನ ಮತ್ತು ಮಾರಾಟಕ್ಕೆ ತರಲಿದ್ದಾರೆ. ಕೆಂಪು ಹಲಸಿನ ವಿಶಿ ್ಟ ತಳಿಯಾದ ಚಂದ್ರ ಹಲಸು ಮಾರಾಟಕ್ಕೆ ಸಿಗಲಿದೆ. ಮುಂಗಾರಿಗೆ ಬಿತ್ತಲು, ತರಕಾರಿ ದೇಸಿ ಬೀಜ, ದೇಸಿ ಭತ್ತ ಮತ್ತು ಸಿರಿಧಾನ್ಯಗಳು ಮೇಳದಲ್ಲಿ ಲಭ್ಯವಿವೆ.  ನಾಳೆ ಸಂಜೆ ಹಲಸು ಎತ್ತುವ ಮತ್ತು ಹಲಸಿನ ತೂಕ ಊಹಿಸುವ ಸ್ಫರ್ಧೆ, ಭಾನುವಾರದಂದು ಬೆಳಿಗ್ಗೆ  10.30ಕ್ಕೆ 5 ರಿಂದ 12 ವರ್ಷದ ಮಕ್ಕಳಿಗಾಗಿ ಹಲಸಿನ ಚಿತ್ರ ಬರೆಯುವ ಸ್ಪರ್ಧೆ, ಮಧ್ಯಾಹ್ನ 12.30 ಕ್ಕೆ ಹಲಸು ಮತ್ತು ಮಾವಿನ ಅಡುಗೆಗಳ ಸ್ಪರ್ಧೆ ಆಯೋಜಿಸಲಾಗಿದೆ. ಇದೆ. ಆಸಕ್ತರು ಹೆಸರು ನೊಂದಾಯಿಸಿಕೊಳ್ಳಬೇಕು. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ ಮೈಸೂರಿನ ಸಹಜ ಸಮೃದ್ಧದ ವಿಶ್ವಸ್ಥ ಮಲ್ಲಿಕಾರ್ಜುನ ಹೊಸಪಾಳ್ಯ.

ಧ್ವನಿ– ಮಲ್ಲಿಕಾರ್ಜುನ ಹೊಸಪಾಳ್ಯಾ.(55 ಸೆಕೆಂದುಗಳು)

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>